**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: 2019–20ನೇ ಸಾಲಿನ ಜಲಾನಯನ ಅಭಿವೃದ್ಧಿ ಇಲಾಖೆಯ ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ಜಲಾನಯನ ಅಭಿವೃದ್ಧಿ ಯೋಜನೆ–II ಸುಜಲ–III (EAP) ಯೋಜನೆಗೆ ಎರಡನೇ ತ್ರೈಮಾಸಿಕಕ್ಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಕೃಇ 41 ಕೃಯೋಕಾ 2019 ದಿನಾಂಕ: 02–04–2019.
2. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2019 ದಿನಾಂಕ: 04–07–2019.
3. ಸರ್ಕಾರದ ಆದೇಶ ಸಂಖ್ಯೆ: ಕೃಇ 61 ಕೃಯೋಕಾ 2019 ದಿನಾಂಕ 13.05.2019.
4. ಜಲಾನಯನ ಅಭಿವೃದ್ಧಿ ಇಲಾಖೆ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಜಅಇ/ಸುಜಲ–3/EAP/ಅನುದಾನ ಬಿಡುಗಡೆ/2019–20 ದಿನಾಂಕ: 03–07–2019.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, 2018–19ನೇ ಸಾಲಿನಲ್ಲಿ ಕೃಷಿ ಇಲಾಖೆಯಲ್ಲಿ ಚಾಲ್ತಿಯಲ್ಲಿದ್ದ ಯೋಜನೆಗಳನ್ನು 2019–20ನೇ ಸಾಲಿನಲ್ಲಿ ಮುಂದುವರೆಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ (2)ರ ಆದೇಶದನ್ವಯ, ರಾಜ್ಯ ಯೋಜನೆಗಳಿಗೆ ಆಯವ್ಯಯದಲ್ಲಿ ಒದಗಿಸಿರುವ ಅನುದಾನದಲ್ಲಿ ಶೇ.25 ರಂತೆ ಎರಡನೇ ಮತ್ತು ಮೂರನೇ ಕಂತಿನ ಅನುದಾನ ಬಿಡುಗಡೆಗೆ ಸರ್ಕಾರದ ಕಾರ್ಯದರ್ಶಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಲಾಗಿದೆ.

ಮೇಲೆ ಓದಲಾದ (3)ರ ಸರ್ಕಾರದ ಆದೇಶದನ್ವಯ, 2019–20ನೇ ಸಾಲಿನ ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ಜಲಾನಯನ ಅಭಿವೃದ್ಧಿ ಯೋಜನೆ–II ಸುಜಲ–III (EAP) ಯೋಜನೆಗೆ ಲೆಕ್ಕ ಶೀರ್ಷಿಕೆ: 2402–00–102–0–28 (ಯೋಜನೆ) ರಡಿ ಮೊದಲನೇ ತ್ರೈಮಾಸಿಕಕ್ಕೆ ರೂ.1250.00 ಲಕ್ಷಗಳ (ಒಂದು ಸಾವಿರದ ಎರಡು ನೂರ ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (4) ರಲ್ಲಿನ ಪ್ರಸ್ತಾವನೆಯಲ್ಲಿ ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ರವರು, ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ಜಲಾನಯನ ಅಭಿವೃದ್ಧಿ ಯೋಜನೆ–II ಸುಜಲ–3 ಬಾಹ್ಯ ನೆರವಿನ ಯೋಜನೆಯ ಲೆಕ್ಕ ಶೀರ್ಷಿಕೆ: 2402–00–102–0–28 ರಡಿ ಆಯವ್ಯಯದಲ್ಲಿ ಒದಗಿಸಲಾಗಿರುವ ರೂ.5000.00 ಲಕ್ಷಗಳಲ್ಲಿ, ಎರಡನೇ ತ್ರೈಮಾಸಿಕ ಕಂತಿನ ಅನುದಾನ ರೂ.1250.00 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

..2)

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ/61/ಕೃಯೋಕಾ/2019, ಬೆಂಗಳೂರು, ದಿನಾಂಕ: 06-08-2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2019-20ನೇ ಸಾಲಿನ ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ಜಲಾನಯನ ಅಭಿವೃದ್ಧಿ ಯೋಜನೆ-II (ಸುಜಲ-III) (EAP) ಯೋಜನೆಗೆ ಲೆಕ್ಕ ಶೀರ್ಷಿಕೆ: 2402-00-102-0-28 (ಯೋಜನೆ) ರಡಿ ಆಯವ್ಯಯದಲ್ಲಿ ಒದಗಿಸಿರುವ ರೂ.5000.00 ಲಕ್ಷಗಳಲ್ಲಿ ಎರಡನೇ ತ್ರೈಮಾಸಿಕದ ಅನುದಾನವಾಗಿ ರೂ.1250.00 ಲಕ್ಷಗಳನ್ನು (ಒಂದು ಸಾವಿರದ ಎರಡು ನೂರ ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಬಿಡುಗಡೆಗೊಳಿಸಿ ಸರ್ಕಾರವು ಆದೇಶಿಸಿದೆ.

ಈ ಆದೇಶವನ್ನು ಟಿಪ್ಪಣಿ ಸಂಖ್ಯೆ: ಕೃಇ/36/ಆಂಆಸ/2019, ದಿನಾಂಕ: 30-07-2019 ರಲ್ಲಿ ಆಂತರಿಕ ಆರ್ಥಿಕ ಸಲಹೆಗಾರರು ನೀಡಿರುವ ಸಹಮತಿ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ/01/ಟಿಎಫ್‌ಪಿ/2019, ದಿನಾಂಕ: 04-07-2019 ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ನೀಡಲಾಗಿರುವ ಆರ್ಥಿಕ ಅಧಿಕಾರದ ಪ್ರತ್ಯಾಯೋಜನೆ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್.ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).
6/8/19

**ಪ್ರತಿಯನ್ನು:-**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
3. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು
4. ಆಯುಕ್ತರು / ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
5. ಆಯುಕ್ತರು / ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
6. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ಬೆಂಗಳೂರು.
9. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ., ಖನಿಜ ಭವನ, ಬೆಂಗಳೂರು
10. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು
11. ಸರ್ಕಾರದ ಉಪ ಕಾರ್ಯದರ್ಶಿ, ಕೃಷಿ ಇಲಾಖೆ ರವರ ಆಪ್ತ ಸಹಾಯಕರು,
12. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.